ಕರ್ನಾಟಕ ಸರ್ಕಾರ
ಪೊಲೀಸ್ ಇಲಾಖೆ

ಸಂಖ್ಯೆ:93/ನೇಮಕಾತಿ-2/2020-21

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ರವರ ಕಛೇರಿ
ಕಾರ್ಲಟನ್ ಭವನ, ಅರಮನೆ ರಸ್ತೆ,
ಬೆಂಗಳೂರು, ದಿನಾಂಕ: 14.06.2021.

ವಿಷಯ: ಸಬ್-ಇನ್ಸ್‌ಪೆಕ್ಟರ್ (ಕೆ.ಎಸ್.ಐ.ಎಸ್.ಎಫ್) (ಪುರುಷ & ಮಹಿಳಾ) ಹಾಗೂ ಸೇವಾನಿರತ ಹುದ್ದೆಗಳ ನೇಮಕಾತಿ ಕುರಿತು.

ಉಲ್ಲೇಖ: 1. ಅಧಿಸೂಚನೆ ಸಂಖ್ಯೆ:93/ನೇಮಕಾತಿ-2/2019-20, ದಿನಾಂಕ: 07.05.2020.
2. ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಣೆ ದಿನಾಂಕ: 30.04.2021.
3. ಶ್ರೀ ಪ್ರಜ್ವಲ್ ಕುಮಾರ್ ಎಸ್ ಗುರನಗೌಡರ್, ರವರ ಮುಚ್ಚಳಿಕೆ ಪ್ರಮಾಣ ಪತ್ರ ದಿ: 03.06.2021.

## ತಾತ್ಕಾಲಿಕ ಆಯ್ಕೆ ಪಟ್ಟಿ

1. ಸಬ್-ಇನ್ಸ್‌ಪೆಕ್ಟರ್ (ಕೆ.ಎಸ್.ಐ.ಎಸ್.ಎಫ್) ಮತ್ತು ವಿಶೇಷ ರಿಸರ್ವ್ ಸಬ್-ಇನ್ಸ್‌ಪೆಕ್ಟರ್ (ಕೆಎಸ್‌ಆರ್‌ಪಿ) (ಪುರುಷ & ಮಹಿಳೆ) ಹಾಗೂ ಸೇವಾನಿರತ ಹುದ್ದೆಗಳ ನೇಮಕಾತಿಯನ್ನು ಉಲ್ಲೇಖಿತ-1ರ ಅಧಿಸೂಚನೆಯನ್ವಯ ಕೈಗೊಳ್ಳಲಾಗಿರುತ್ತದೆ. ವೃಂದ ಮತ್ತು ನೇಮಕಾತಿ (ತಿದ್ದುಪಡಿ) ನಿಯಮಗಳು, 2011 ರಲ್ಲಿನ ನಿಯಮಗಳನ್ವಯ ಮೇಲ್ಕಂಡ ಪ್ರಕ್ರಿಯೆಗಳು ಪೂರ್ಣಗೊಂಡ ನಂತರ ನೇಮಕಾತಿ ಅಧಿಸೂಚನೆಯಲ್ಲಿ ಪ್ರಕಟಿಸಲಾಗಿರುವ ಹುದ್ದೆಗಳಂತೆ ಮೆರಿಟ್ ಹಾಗೂ ಮೀಸಲಾತಿಯನುಸಾರ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ. ನಂತರ ವಿಶೇಷ ರಿಸರ್ವ್ ಸಬ್-ಇನ್ಸ್‌ಪೆಕ್ಟರ್ (ಕೆಎಸ್‌ಆರ್‌ಪಿ) ಹುದ್ದೆಗಳ ಆಯ್ಕೆ ಪಟ್ಟಿಯಲ್ಲಿನ ಕೆಲವು ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಗೊಳಿಸಿದ ಕಾರಣದಿಂದ ಸದರಿಯವರುಗಳ ಸ್ಥಾನಗಳಿಗೆ ಹೊಸ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಉಲ್ಲೇಖಿತ-2ರನ್ವಯ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

2. ವಿಶೇಷ ರಿಸರ್ವ್ ಸಬ್-ಇನ್ಸ್‌ಪೆಕ್ಟರ್ (ಕೆಎಸ್‌ಆರ್‌ಪಿ) ಹುದ್ದೆಗಳಿಗೆ ಉಲ್ಲೇಖಿತ-2ರ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳಲ್ಲಿ ಶ್ರೀ ಪ್ರಜ್ವಲ್ ಕುಮಾರ್ ಎಸ್ ಗುರನಗೌಡರ್ ರವರು ಮುಚ್ಚಳಿಕೆ ಪ್ರಮಾಣ ಪತ್ರವನ್ನು ಸಲ್ಲಿಸಿ ವಿಶೇಷ ರಿಸರ್ವ್ ಸಬ್-ಇನ್ಸ್‌ಪೆಕ್ಟರ್ (ಕೆಎಸ್‌ಆರ್‌ಪಿ) ಹುದ್ದೆಗೆ ಸೇರಲು ಇಚ್ಚೆ ಇರುವುದಿಲ್ಲವೆಂದು ತಿಳಿಸಿದ ಮೇರೆಗೆ ಸದರಿಯವರ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗಿರುತ್ತದೆ. ಸದರಿಯವರ ಆಯ್ಕೆಯನ್ನು ರದ್ದುಗೊಳಿಸಿ, ಅರ್ಹತಾ ಪಟ್ಟಿಯನ್ನು ಪರಿಷ್ಕರಿಸಿದ ಕಾರಣದಿಂದ ಈಗಾಗಲೇ ಸಬ್-ಇನ್ಸ್‌ಪೆಕ್ಟರ್ (ಕೆ.ಎಸ್.ಐ.ಎಸ್.ಎಫ್) ಹುದ್ದೆಗೆ ಆಯ್ಕೆಯಾಗಿರುವ ಶ್ರೀ ನವೀನ ಟಿ.ಆರ್, ರವರು ಮೆರಿಟ್ ಹಾಗೂ ಮೀಸಲಾತಿ ಮತ್ತು ಹುದ್ದೆಗಳ ಆದ್ಯತೆಯನುಸಾರ ವಿಶೇಷ ರಿಸರ್ವ್ ಸಬ್-ಇನ್ಸ್‌ಪೆಕ್ಟರ್ (ಕೆಎಸ್‌ಆರ್‌ಪಿ) ಹುದ್ದೆಗೆ ಆಯ್ಕೆಯಾಗಿರುತ್ತಾರೆ.

3. ಶ್ರೀ ನವೀನ ಟಿ.ಆರ್, ರವರು ಸಬ್–ಇನ್ಸ್‌ಪೆಕ್ಟರ್ (ಕೆ.ಎಸ್.ಐ.ಎಸ್.ಎಫ್) ಹುದ್ದೆಯಿಂದ ವಿಶೇಷ ರಿಸರ್ವ್ ಸಬ್–ಇನ್ಸ್‌ಪೆಕ್ಟರ್ (ಕೆಎಸ್ಆರ್‌ಪಿ) ಹುದ್ದೆಗೆ ಆಯ್ಕೆಯಾದ ಕಾರಣ ಸದರಿಯವರ ರಿಕ್ತಸ್ಥಾನಕ್ಕೆ ಮೆರಿಟ್ ಹಾಗೂ ಮೀಸಲಾತಿಯನುಸಾರ ಹೊಸ ಅಭ್ಯರ್ಥಿಯನ್ನು ಆಯ್ಕೆ ಮಾಡಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಕೆಳಗಿನಂತೆ ಪ್ರಕಟಿಸಲಾಗಿರುತ್ತದೆ.

ಎ) ಈ ಆಯ್ಕೆ ಪಟ್ಟಿಯು ನಿಯಮಗಳನುಸಾರ ರಚಿಸಲಾಗಿರುವ ವೈದ್ಯಕೀಯ ಮಂಡಳಿಯು ನಡೆಸುವ ವೈದ್ಯಕೀಯ ಪರೀಕ್ಷೆಯ ಫಲಿತಾಂಶಗಳಿಗೆ ಒಳಪಟ್ಟಿರುತ್ತದೆ.

ಬಿ) ಆಯ್ಕೆ ಪಟ್ಟಿಯಲ್ಲಿ ಅಭ್ಯರ್ಥಿಯ ಹೆಸರು ಇದ್ದ ಕಾರಣದಿಂದ ಸದರಿಯವರಿಗೆ ಹುದ್ದೆಯ ನೇಮಕಾತಿಗೆ ಸಂಬಂಧಿಸಿದಂತೆ, ಯಾವುದೇ ರೀತಿಯ ಕಾನೂನಾತ್ಮಕ ಹಕ್ಕು ಇರುವುದಿಲ್ಲ. ಸದರಿ ನೇಮಕಾತಿಯು ಮೇಲ್ಕಂಡಂತೆ ಹೇಳಲಾದ ಷರತ್ತುಗಳಿಗೆ ಒಳಪಟ್ಟಿರುತ್ತದೆ.

ಸಿ) ಈ ಆಯ್ಕೆ ಪಟ್ಟಿಯು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿ / ಮಾನ್ಯ ಉಚ್ಚ ನ್ಯಾಯಾಲಯ / ಮಾನ್ಯ ಭಾರತದ ಸರ್ವೋಚ್ಚ ನ್ಯಾಯಾಲಯದ ಅಂತಿಮ ತೀರ್ಮಾನಗಳಿಗೆ ಒಳಪಟ್ಟಿರುತ್ತದೆ.

| PROVISIONAL SELECT LIST FOR THE POST OF SUB-INSPECTOR (KSISF) (MEN) (MERITWISE) | | | | | | | |
|---|---|---|---|---|---|---|---|
| SL. NO. | APPN. NO. | ROLL NO. | NAME | MARKS SECURED | | TOTAL | SELECTED CATEGORY |
| | | | | P1 | P2 | | |
| 1 | 3018047 | 4005020 | KIRAN KUMAR S HOLEMMANAVAR | 42.5 | 129 | 171.5 | 3B_RUR |

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ಮತ್ತು ಅಧ್ಯಕ್ಷರು,
ಎಸ್.ಐ (ಕೆ.ಎಸ್.ಐ.ಎಸ್.ಎಫ್) ನೇಮಕಾತಿ ಸಮಿತಿ,
ಕಾರ್ಲಟನ್ ಭವನ, ಅರಮನೆ ರಸ್ತೆ,
ಬೆಂಗಳೂರು.

ಪ್ರತಿಯನ್ನು: ಕಛೇರಿ ಕಡತ ಮತ್ತು ಸೂಚನಾ ಫಲಕ.

ಪ್ರತಿಯನ್ನು ಅಭಿನಂದನೆಗಳೊಂದಿಗೆ:
ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಕರ್ನಾಟಕ ರಾಜ್ಯ, ಬೆಂಗಳೂರು.